**All India Radio: Bangalore**
**National Bulletin In Kannada**
**09.11.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ರಾಷ್ಟ್ರಪತಿ ದ್ರೌಪದಿ ಮುರ್ಮು-ಅಂಗೋಲಾ ಅಧ್ಯಕ್ಷರ ನಡುವೆ ದ್ವಿಪಕ್ಷೀಯ ಮಾತುಕತೆ : ಎರಡು ತಿಳಿವಳಿಕೆ ಪತ್ರಗಳಿಗೆ ಸಹಿ
2. ಸವಾಲುಗಳನ್ನು ಸಮರ್ಪಣಾ ಮನೋಭಾವದಿಂದ ಎದುರಿಸಲು ವಿದ್ಯಾರ್ಥಿಗಳಿಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕರೆ
3. ಪ್ರಧಾನಿ ನರೇಂದ್ರ ಮೋದಿ ಮಂಗಳವಾರದಿಂದ ಎರಡು ದಿನ ಭೂತಾನ್ ಭೇಟಿ
4. ಉತ್ತರಾಖಂಡ್‌ನಲ್ಲಿ ೮ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಕಾಮಗಾರಿಗಳಿಗೆ ಶಿಲಾನ್ಯಾಸ ಮತ್ತು ಉದ್ಘಾಟನೆ
5. ಬಿಹಾರ ವಿಧಾನಸಭೆ ಚುನಾವಣೆ : ಬಹಿರಂಗ ಪ್ರಚಾರಕ್ಕೆ ತೆರೆ

<><><><>

ಅಂಗೋಲಾ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಲೌಂಡಾದಲ್ಲಿ ಇಂದು ಅಂಗೋಲಾ ಅಧ್ಯಕ್ಷ ಜೊವೊ ಲೊರೆಂಕೊ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಭಾರತ-ಅಂಗೋಲಾ ನಡುವಿನ ಬಹುಪಕ್ಷೀಯ ಸಹಭಾಗಿತ್ವ ಬಲಪಡಿಸುವ ಕುರಿತಂತೆ ಉಭಯ ಧುರೀಣರು ಸಮಗ್ರ ಮಾತುಕತೆ ನಡೆಸಿದರು. ಉತ್ತಮ ಸಂಸದೀಯ ಅಭ್ಯಾಸ ಹಾಗೂ ಕೃಷಿ, ತೈಲ ಅನ್ವೇಷಣೆ, ಸಂಪರ್ಕ, ಸಾರಿಗೆ ಮೂಲಸೌಕರ್ಯ, ಅಪರೂಪದ ಖನಿಜ, ವಜ್ರ ಸಂಸ್ಕರಣೆ ಕ್ಷೇತ್ರಗಳಲ್ಲಿ ಸಹಯೋಗಕ್ಕೆ ಅವಕಾಶಗಳಿವೆ ಎಂದು ದ್ರೌಪದಿ ಮುರ್ಮು ಹೇಳಿದರು. ಭಾರತ ತನ್ನಲ್ಲಿರುವ ಪರಿಣತೆಯನ್ನು ಅಂಗೋಲಾದ ಪ್ರಗತಿಗಾಗಿ ಹಂಚಿಕೊಂಡು ಪರಸ್ಪರ ಅಭಿವೃದ್ಧಿ ಸಾಧಿಸಲು ಸಿದ್ಧವಿರುವುದಾಗಿ ರಾಷ್ಟ್ರಪತಿ ಹೇಳಿದರು. ಸಾಮರ್ಥ್ಯ ನಿರ್ಮಾಣ, ತರಬೇತಿ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ರಕ್ಷಣಾ ಸಹಕಾರ ಹಾಗೂ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಸುಧಾರಣೆ ಕುರಿತಂತೆ ರಾಷ್ಟ್ರಪತಿಯವರು ಪ್ರಸ್ತಾಪಿಸಿದರು. ಇದೇ ಸಂದರ್ಭದಲ್ಲಿ ಮೀನುಗಾರಿಕೆ, ಸಮುದ್ರ ಸಂಪನ್ಮೂಲ ಕ್ಷೇತ್ರಗಳ ಸಹಕಾರ ವರ್ಧಿಸುವ ಎರಡು ತಿಳಿವಳಿಕೆ ಪತ್ರಗಳಿಗೆ ಸಹಿ ಹಾಕಲಾಯಿತು.

**ಧ್ವನಿ : ರಾಷ್ಟ್ರಪತಿ ದ್ರೌಪದಿ ಮುರ್ಮು (೨೯ ಸೆಕೆಂಡ್‌ಗಳು)**

ಭಾರತ ನೇತೃತ್ವದ ಜಾಗತಿಕ, ಜೈವಿಕ, ಇಂಧನ ಮೈತ್ರಿ ಮತ್ತು ಅಂತಾರಾಷ್ಟ್ರೀಯ ದೊಡ್ಡ ಬೆಕ್ಕು ತಳಿಮೈತ್ರಿ ಉಪಕ್ರಮಗಳಲ್ಲಿ ಸಹಭಾಗಿತ್ವವನ್ನು ಹೊಂದಲು ಅಂಗೋಲಾ ಮುಂದಾಗಿದೆ. ಇದಕ್ಕೂ ಮುನ್ನ ಲೌಂಡಾದ ಅಧ್ಯಕ್ಷೀಯ ಅರಮನೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಆಗಮಿಸಿದಾಗ ಅವರಿಗೆ ಗೌರವ ರಕ್ಷೆ ಹಾಗೂ ಭವ್ಯ ಸ್ವಾಗತ ನೀಡಲಾಯಿತು. ನಂತರ ರಾಷ್ಟ್ರಪತಿಯವರು ನೀಡಿದ ಸುದ್ದಿ ಹೇಳಿಕೆಯಲ್ಲಿ ಅಂಗೋಲಾದ ೫೦ನೇ ವಾರ್ಷಿಕೋತ್ಸವದಲ್ಲಿ ಪಾಲ್ಗೊಳ್ಳಲು ಸಂತಸವಾಗುತ್ತಿದೆ ಹಾಗೂ ಅಂಗೋಲಾದ ಜನತೆಗೆ ೧೪೦ ಕೋಟಿ ಭಾರತೀಯರ ಪರವಾಗಿ ಶುಭ ಕೋರಿರುವುದಾಗಿ ತಿಳಿಸಿದ್ದಾರೆ.

<><><>

ವಿದ್ಯಾರ್ಥಿಗಳು ಸವಾಲುಗಳನ್ನು ಸಮರ್ಪಣಾ ಮನೋಭಾವದಿಂದ ಎದುರಿಸಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕರೆ ನೀಡಿದ್ದಾರೆ. ಅವರು, ಮೈಸೂರಿನಲ್ಲಿಂದು ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯ ೧೬ನೇ ಘಟಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು. ಭಗವದ್ಗೀತೆಯನ್ನು ಉಲ್ಲೇಖಿಸಿದ ಅವರು, ಫಲಾಪೇಕ್ಷೆ ಇಲ್ಲದೇ ಕರ್ತವ್ಯ ನಿರ್ವಹಿಸಬೇಕು ಎಂದರು. ಕಾಲೇಜುಗಳಲ್ಲಿ ಪಡೆದ ಜ್ಞಾನವನ್ನು ಬಳಸಿಕೊಂಡು ತಮ್ಮ ಗುರಿ ಸಾಧನೆಯತ್ತ ಗಮನಹರಿಸಬೇಕು. ಯಶಸ್ಸು ಅಥವಾ ವೈಫಲ್ಯಗಳನ್ನು ಪರಿಗಣಿಸದೇ ಪ್ರತಿಬಾರಿಯೂ ಉತ್ತಮ ಸಾಧನೆ ಮಾಡಲು ಸಂತಸದ, ಸಮರ್ಪಣೆಯ ಏಕ ಮನದಿಂದ ಶ್ರಮಿಸಬೇಕು ಎಂದರು. ಸ್ವಾಮೀ ವಿವೇಕಾನಂದ ಅವರ ಎದ್ದೇಳಿ, ಜಾಗೃತರಾಗಿ, ಗುರಿ ತಲುಪುವವರೆಗೆ ನಿಲ್ಲದಿರಿ ಎನ್ನುವ ಕರೆಯನ್ನು ಉಲ್ಲೇಖಿಸಿದ ಉಪರಾಷ್ಟ್ರಪತಿ ರಾಧಾಕೃಷ್ಣನ್ ಇತರರ ಉತ್ತಮ ಗುಣಗಳನ್ನು ಅಳವಡಿಸಿಕೊಳ್ಳಬೇಕು ಹಾಗೂ ಬೇರೆಯವರ ತ್ವರಿತ ಪ್ರಗತಿಯನ್ನು ತಮ್ಮೊಂದಿಗೆ ಹೋಲಿಕೆ ಮಾಡಿಕೊಳ್ಳಬಾರದು ಎಂದರು. ಸವಾಲುಗಳು ವ್ಯಕ್ತಿಯನ್ನು ಬಲಗೊಳಿಸುತ್ತವೆ ಎಂದರು.

**ಧ್ವನಿ : ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ (೩೮ ಸೆಕೆಂಡ್‌ಗಳು)**

ಉಪರಾಷ್ಟ್ರಪತಿಯವರು ಮೊಬೈಲ್ ಹವ್ಯಾಸದಿಂದ ದೂರವಿರುವಂತೆ ಹಾಗೂ ಗುರು-ಹಿರಿಯರನ್ನು ಗೌರವದಿಂದ ಕಾಣುವಂತೆ ಹೇಳಿದರು.

<><><>

ಕೇಂದ್ರ ಸರ್ಕಾರ ಕಳೆದ ತಿಂಗಳು ತ್ಯಾಜ್ಯ ತುಣುಕುಗಳನ್ನು ಮಾರಾಟ ಮಾಡುವ ಮೂಲಕ ೮೦೦ ಕೋಟಿ ರೂಪಾಯಿ ಗಳಿಸಿದೆ. ಇದು ಚಂದ್ರಯಾನ-೩ರ ವೆಚ್ಚಕ್ಕಿಂತ ಹೆಚ್ಚಿನ ಗಳಿಕೆಯಾಗಿದೆ. ಪ್ರಧಾನಮಂತ್ರಿ ಕಾರ್ಯಾಲಯ ಹಂಚಿಕೊಂಡ ಸುದ್ದಿಲೇಖನದಲ್ಲಿ ಈ ವಿಷಯ ತಿಳಿಸಲಾಗಿದೆ.

<><><>

ಪ್ರಧಾನಿ ನರೇಂದ್ರ ಮೋದಿ ಭೂತಾನ್‌ಗೆ ನಾಡಿದ್ದು, ಮಂಗಳವಾರದಿಂದ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ ಮೋದಿ ಹಾಗೂ ಭೂತಾನ್ ದೊರೆ ಜಿಗ್ಮೆ ಕೇಸರ್ ನ್ಯಾಮಗೇಲ್ ವಾಂಗ್ ಚುಕ್ ಜಂಟಿಯಾಗಿ ಪುನ್ಯಾಟ್‌ಸ್ಯಾಂಗ್‌ಚು ಜಲವಿದ್ಯುತ್ ೨ನೇ ಯೋಜನೆಯನ್ನು ಉದ್ಘಾಟಿಸಲಿದ್ದಾರೆ. ಒಂದು ಸಾವಿರದ ೨೦ ಮೆಗಾವ್ಯಾಟ್ ಸಾಮರ್ಥ್ಯದ ಈ ಜಲವಿದ್ಯುತ್ ಯೋಜನೆಯನ್ನು ಭಾರತ ಹಾಗೂ ಭೂತಾನ್ ಜಂಟಿಯಾಗಿ ಅಭಿವೃದ್ಧಿಪಡಿಸಿವೆ. ಪ್ರಧಾನಿಯವರು ಭೂತಾನ್‌ನ ೪ನೇ ದೊರೆ ಜಿಗ್ಮೆ ವಾಂಗ್ ಚುಕ್ ಅವರ ೭೦ನೇ ಜನ್ಮ ದಿನೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ ಹಾಗೂ ಭೂತಾನ್ ಪ್ರಧಾನಿ ಟೆಶೆರಿಂಗ್ ತೊಬ್ಗೆ ಅವರನ್ನು ಭೇಟಿ ಮಾಡಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದಲ್ಲಿ ಪಾಲ್ಗೊಂಡು, ಥಿಂಪುವಿನ ತಶಿಚೊಡಜೊಂಗ್‌ನಲ್ಲಿ ಇರುವ ಪವಿತ್ರ ಅವಶೇಷಗಳಿಗೆ ಪ್ರಾರ್ಥನೆ ಸಲ್ಲಿಸಲಿದ್ದಾರೆ. ಪ್ರಧಾನಿಯವರ ಈ ಭೇಟಿ ಉಭಯ ದೇಶಗಳ ಪ್ರಾದೇಶಿಕ ಹಾಗೂ ಪರಸ್ಪರ ಹಿತಾಸಕ್ತಿಯ ವಿಚಾರ ಕುರಿತ ಚರ್ಚೆಗೆ ಅವಕಾಶ ಕಲ್ಪಿಸಲಿದ್ದು, ದ್ವಿಪಕ್ಷೀಯ ಸಹಭಾಗಿತ್ವ ಬಲಗೊಳ್ಳಲು ಅವಕಾಶ ಕಲ್ಪಿಸುತ್ತಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

<><><><>

ಭಾರತದಿಂದ ಕಳುಹಿಸಲಾದ ಭಗವಾನ್ ಬುದ್ಧರ ಪವಿತ್ರ ಅವಶೇಷಗಳಿಗೆ ಭೂತಾನಿನ ನಾಯಕರು ಹಾಗೂ ಜನತೆ ತೋರಿದ ಶ್ರದ್ಧಾ ಗೌರವಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಈ ಅವಶೇಷಗಳು ಶಾಂತಿ, ಅನುಕಂಪ ಹಾಗೂ ಸಾಮರಸ್ಯದ ಪ್ರತೀಕವಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ತಿಳಿಸಿದ್ದಾರೆ. ಭಗವಾನ್ ಬುದ್ಧರ ಉಪದೇಶಗಳು ಭಾರತ-ಭೂತಾನ್ ನಡುವಿನ ದೈವಿಕ ಪರಂಪರೆಯ ಪವಿತ್ರ ಸಂಬಂಧಗಳಾಗಿವೆ ಎಂದು ಪ್ರಧಾನಿಯವರು ತಿಳಿಸಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಉತ್ತರಾಖಂಡ್‌ನ ರಜತ ರಾಜ್ಯೋತ್ಸವ ಸಂದರ್ಭದಲ್ಲಿಂದು ಸುಮಾರು ೮ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಿಲಾನ್ಯಾಸ ಹಾಗೂ ಉದ್ಘಾಟನೆ ನೆರವೇರಿಸಿದರು. ಕುಡಿಯುವ ನೀರು, ನೀರಾವರಿ, ತಾಂತ್ರಿಕ ಶಿಕ್ಷಣ, ಇಂಧನ, ನಗರಾಭಿವೃದ್ಧಿ, ಕ್ರೀಡೆ ಮತ್ತು ಕೌಶಲ್ಯಾಭಿವೃದ್ಧಿ ಮೊದಲಾದ ಪ್ರಮುಖ ಕ್ಷೇತ್ರಗಳಿಗೆ ಸಂಬಂಧಿಸಿದ ಯೋಜನೆಗಳನ್ನು ಇದು ಒಳಗೊಂಡಿದೆ. ಪ್ರಧಾನಮಂತ್ರಿ ಫಸಲ್ ವಿಮಾ ಯೋಜನೆಯಡಿ ೨೮ ಸಾವಿರಕ್ಕೂ ಅಧಿಕ ರೈತರ ಬ್ಯಾಂಕ್ ಖಾತೆಗಳಿಗೆ ೬೨ ಕೋಟಿ ರೂಪಾಯಿ ಹಣಕಾಸು ನೆರವನ್ನು ಬಿಡುಗಡೆಮಾಡಿದರು. ಡೆಹರಾಡೂನ್‌ನ ಅರಣ್ಯ ಸಂಶೋಧನಾ ಸಂಸ್ಥೆಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ

ಮೋದಿ, ರಾಜ್ಯದ ರಜತ ಮಹೋತ್ಸವ ಆಚರಿಸುತ್ತಿರುವ ಜನತೆಯನ್ನು ಅಭಿನಂದಿಸಿದರು. ಕಳೆದ ೨೫ ವರ್ಷಗಳಲ್ಲಿ ಉತ್ತರಾಖಂಡ್ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದೆ. ಇದುವರೆಗೆ ಬಳಸಿಕೊಳ್ಳಲಾಗದ ಸಾಮರ್ಥ್ಯದ ಸದುಪಯೋಗ ಪಡಿಸಿಕೊಳ್ಳುವ ಬಗ್ಗೆ ಗಮನ ಕೇಂದ್ರೀಕರಿಸಬೇಕು. ಉತ್ತರಾಖಂಡ್ ಉನ್ನತಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಎರಡೂ ಸತತವಾಗಿ ಪ್ರಯತ್ನಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಇದಕ್ಕೂ ಮುನ್ನ ಪ್ರಧಾನಿಯವರು ವಿವಿಧ ಫಲಾನುಭವಿಗಳೊಂದಿಗೆ ಸಂವಾದ ನಡೆಸಿದರು.

<><><><>

ಬಿಹಾರ ವಿಧಾನಸಭೆಯ ೨ನೇ ಹಂತದ ಮತದಾನ ನಡೆಯಲಿರುವ ಕ್ಷೇತ್ರಗಳಲ್ಲಿ ಬಹಿರಂಗ ಪ್ರಚಾರಕ್ಕೆ ಕೊನೆಯ ದಿನವಾದ ಇಂದು ವಿವಿಧ ರಾಜಕೀಯ ಪಕ್ಷಗಳ ಧುರೀಣರು ಬಿರುಸಿನ ಪ್ರಚಾರ ನಡೆಸಿದರು. ಎನ್‌ಡಿಎ ಮತ್ತು ಮಹಾಘಟಬಂಧನ್ ನಾಯಕರು ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ರ್‍ಯಾಲಿ, ರೋಡ್ ಶೋ ನಡೆಸಿ ಮತಯಾಚನೆ ನಡೆಸಿದರು. ಹಿರಿಯ ಬಿಜೆಪಿ ಧುರೀಣರು ಹಾಗೂ ಕೇಂದ್ರ ಸಚಿವರುಗಳಾದ ಅಮಿತ್ ಶಾ, ರಾಜನಾಥ್ ಸಿಂಗ್, ಶಿವರಾಜ್ ಸಿಂಗ್ ಚೌವ್ಹಾಣ್ ಮೊದಲಾದವರು ಚುನಾವಣಾ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಎನ್‌ಡಿಎ ಅಭ್ಯರ್ಥಿ ಪರ ಮತ ಯಾಚಿಸಿದರು. ಹಿರಿಯ ಕಾಂಗ್ರೆಸ್ ಧುರೀಣ ರಾಹುಲ್ ಗಾಂಧಿ, ಕಿಶನ್ ಗಂಜ್ ಮತ್ತು ಪೂರ್ನಿಯಾಗಳಲ್ಲಿ ರ್‍ಯಾಲಿ ನಡೆಸಿ ಮಹಾಘಟಬಂಧನ್ ಅಭ್ಯರ್ಥಿ ಪರ ಪ್ರಚಾರ ನಡೆಸಿದರು. ಜೆಡಿಯು ಅಧ್ಯಕ್ಷ ಹಾಗೂ ಮುಖ್ಯಮಂತ್ರಿ ನಿತೀಶ್ ಕುಮಾರ್, ಕೈಮೂರ್‌ನಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿ, ರಾಜ್ಯದ ಜನತೆ ೧೨೫ ಯುನಿಟ್‌ವರೆಗೆ ಉಚಿತ ವಿದ್ಯುತ್ ಪಡೆಯುತ್ತಿದ್ದಾರೆ. ಜನರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಈ ಕ್ರಮ ಕೈಗೊಳ್ಳಲಾಗಿದೆ. ಎನ್‌ಡಿಎ ಪುನರಾಯ್ಕೆಗೊಂಡರೆ ಅಭಿವೃದ್ಧಿ ಕಾರ್ಯಕ್ರಮಗಳು ತ್ವರಿತಗೊಳ್ಳುತ್ತವೆ ಎಂದು ಹೇಳಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>